ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 334

ಸದಸ್ಯರ ಹೆಸರು : ಶ್ರೀ ಎನ್.ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು)

ಉತ್ತರಿಸುವವರು : ಮಾನ್ಯ ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು.

ಉತ್ತರಿಸಬೇಕಾದ ದಿನಾಂಕ : 14-09-2021

ಕ್ರ.ಸಂ.	ಪ್ರಶ್ನೆ	ಉತ್ತರ
ಅ)	ರಾಜ್ಯದಲ್ಲಿ ಕೋವಿಡ್-19 ಇರುವ ಸಮಯದಲ್ಲಿ ಇಲಾಖೆ ವತಿಯಿಂದ ಅಂಗನವಾಡಿ ಮಕ್ಕಳಿಗೆ ಹಾಗೂ ಗರ್ಭಿಣಿ ಮತ್ತು ಬಾಣಂತಿಯವರಿಗೆ ಪೌಷ್ಠಿಕ ಆಹಾರವನ್ನು ನೀಡಲು ಯಾವ ಕ್ರಮ ಕೈಗೊಳ್ಳಲಾಗಿದೆ; (ಜಿಲ್ಲಾವಾರು ವಿವರ ನೀಡುವುದು).	ರಾಜ್ಯದಲ್ಲಿ ಕೋವಿಡ್ -19 ಸಾಂಕ್ರಮಿಕ ರೋಗದ ಹಿನ್ನಲೆಯಲ್ಲಿ ಅಂಗನವಾಡಿ ಕೇಂದ್ರಗಳು ಮುಚ್ಚಿರುವುದರಿಂದ ಅಂಗನವಾಡಿ ಕೇಂದ್ರಗಳಲ್ಲಿ ಪೂರಕ ಪೌಷ್ಠಿಕ ಆಹಾರವನ್ನು ತಯಾರಿಸಿ ನೀಡುತ್ತಿಲ್ಲ, ಬದಲಾಗಿ ಅಂಗನವಾಡಿ ಕೇಂದ್ರಗಳ ಫಲಾನುಭವಿಗಳಿಗೆ ಅಂಗನವಾಡಿ ಕಾರ್ಯಕರ್ತೆ ಹಾಗೂ ಅಂಗನವಾಡಿ ಸಹಾಯಕಿಯರ ಮೂಲಕ ಮನೆ ಬಾಗಲಿಗೆ ಕಚ್ಚಾ ಆಹಾರ ಪದಾರ್ಥಗಳನ್ನು ವಿತರಿಸಲಾಗುತ್ತಿದೆ.
ಆ)	ಅಂಗನವಾಡಿಯನ್ನು ಪುನರಾರಂಭಿಸಲು ಸರ್ಕಾರದ ನಿಲುವೇನು;	ತಜ್ಞರ ಸಮಿತಿಯು ಅಂಗನವಾಡಿ ಕೇಂದ್ರ ತೆರೆಯಲು ಶಿಫಾರಸ್ಸು ಮಾಡಿದ್ದು, ಸದ್ಯದಲ್ಲೇ ನಿರ್ದಿಷ್ಠ ಮಾರ್ಗಸೂಚಿಗಳೊಂದಿಗೆ ಪುನರಾರಂಭಿಸಲಾಗುವುದು.
ಇ)	ಪುನರಾರಂಭಿಸಲು ಇಲಾಖೆ ಕೋವಿಡ್ ಮಾರ್ಗಸೂಚಿಯನ್ವಯ ಯಾವ ಯಾವ ಕ್ರಮಕೈಗೊಂಡಿದೆ; (ವಿವರ ನೀಡುವುದು)	
ಈ)	ಮಂಡ್ಯ ಜಿಲ್ಲೆಯಲ್ಲಿ ಪ್ರಸ್ತುತ ಖಾಲಿಯಿರುವ ಅಂಗನವಾಡಿ ಕಾರ್ಯಕರ್ತೆಯರ ಮತ್ತು ಸಹಾಯಕಿಯರ ಹುದ್ದೆಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)	ಮಂಡ್ಯ ಜಿಲ್ಲೆಯಲ್ಲಿ ಪ್ರಸ್ತುತ 75 ಅಂಗನವಾಡಿ ಕಾರ್ಯಕರ್ತೆಯರ ಮತ್ತು 63 ಸಹಾಯಕಿಯರ ಹುದ್ದೆಗಳು ಖಾಲಿಯಿರುತ್ತವೆ. ತಾಲ್ಲೂಕುವಾರು ವಿವರವನ್ನು ಅನುಬಂಧದಲ್ಲಿ ಒದಗಿಸಿದೆ.
ಉ)	ಹಾಗಿದ್ದಲ್ಲಿ; ಖಾಲಿ ಹುದ್ದೆಗಳನ್ನು ಯಾವಾಗ ಭರ್ತಿ ಮಾಡಲಾಗುವುದು? (ವಿವರ ನೀಡುವುದು)	ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಆನ್ ಲೈನ್ ಮೂಲಕ ಪ್ರಕಟಣೆ ಹೊರಡಿಸಿ, ಆದಷ್ಟು ಶೀಘ್ರ ಭರ್ತಿ ಮಾಡಲಾಗುವುದು.

ಸಂಖ್ಯೆ: ಮಮಇ 218 ಐಸಿಡಿ 2021

Halappa BA

(ಆಚಾರ ಹಾಲಪ್ಪ ಬಸಪ್ಪ)
ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು
ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಹಾಗೂ
ಹಿರಿಯ ನಾಗರಿಕರ ಸಬಲೀಕರಣ ಸಚಿವರು.

ಅನುಬಂಧ

ಮಂಡ್ಯ ಜಿಲ್ಲೆಯ ಮುಖ್ಯ ಅಂಗನವಾಡಿ ಕಾರ್ಯಕರ್ತೆ/ಅಂಗನವಾಡಿ ಸಹಾಯಕಿಯರ/ ಮಿನಿ ಅಂಗನವಾಡಿ ಕಾರ್ಯಕರ್ತೆಯರ ಮಂಜೂರು,ಭರ್ತಿ, ಖಾಲಿಯಿರುವ ಹುದ್ದೆಗಳ ವಿವರ (ಆಗಸ್ಟ್ - 2021ರ ಅಂತ್ಯಕ್ಕೆ)

ಕ್ರ.ಸಂ	ಜಿಲ್ಲೆಹೆಸರು	ಯೋಜನೆಯ ಹೆಸರು	ಮುಖ್ಯ ಅಂಗನವಾಡಿ ಕಾರ್ಯಕರ್ತೆಯರ ಹುದ್ದೆಗಳು			ಅಂಗನವಾಡಿ ಸಹಾಯಕಿಯರ ಹುದ್ದೆಗಳು			ಮಿನಿ ಅಂಗನವಾಡಿ ಕಾರ್ಯಕರ್ತೆಯರು		
			ಮಂಜೂರು	ಭರ್ತಿ	ಖಾಲಿ	ಮಂಜೂರು	ಭರ್ತಿ	ಖಾಲಿ	ಮಂಜೂರು	ಭರ್ತಿ	ಖಾಲಿ
1	ಮಂಡ್ಯ	ಶ್ರೀರಂಗಪಟ್ಟಣ	210	204	6	210	205	5	11	11	0
2		ಪಾಂಡವಪುರ	236	229	7	236	223	13	30	30	0
3		ನಾಗಮಂಗಲ	245	241	4	245	240	5	121	106	15
4		ಮಳವಳ್ಳಿ	339	332	7	339	339	0	2	2	0
5		ಮದ್ದೂರು	392	387	5	392	374	18	42	30	12
6		ಮಂಡ್ಯ	249	246	3	249	241	8	16	9	7
7		ದುದ್ದ	231	230	1	231	228	3	24	23	1
8		ಕೆ.ಆರ್.ಪೇಟೆ	338	331	7	338	327	11	60	60	0
ಒಟ್ಟು			2240	2200	40	2240	2177	63	306	271	35